ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿವೇಶನಗಳ ಹಂಚಿಕೆ ಮಾಡಿರುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

902 (1104) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ನಗರದಲ್ಲಿ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದಿಂದ ಅಭಿವೃದ್ಧಿ ಪಡಿಸಿರುವ (ಮಂಡ್ಯದ ಕೆರೆ ಅಂಗಳದ) ವಿವೇಕಾನಂದ ನಗರ ಬಡಾವಣೆಯನ್ನು ಯಾವಾಗ ಅಭಿವೃದ್ಧಿ ಪಡಿಸಲಾಗಿದೆ;

(ಆ) ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಈ ನಿವೇಶನಗಳಿಗೆ ಸರಿಯಾದ ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಕಾರಣವೇನು;

(ಈ) ಈ ಬಡಾವಣೆಯ ಬಗ್ಗೆ ಸಿ.ಬಿ.ಐ. ತನಿಖೆ ನಡೆದಿದ್ದು ಸದರಿ ತನಿಖಾ ವರದಿ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಉ) ಸದರಿ ಬಡಾವಣೆಯ ಸಮಸ್ಯೆಗಳನ್ನು ಬಗೆಹರಿಸಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)